ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 103 ಗ್ರಾಪಂಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:05.12.2017

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿಗಳು,

ಮಾನ್ಯರೆ,

**ವಿಷಯ:** ರಾಜ್ಯದ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಗಾಗಿ ವಿಧಾನದ ಆದೇಶಕ್ಕೆ ತಿದ್ದೋಲೆ ಹೊರಡಿಸಿರುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 103 ಗ್ರಾಪಂಸಿ 2016, ಬೆಂಗಳೂರು. ದಿನಾಂಕ: 02.11.2017
2) ಸರ್ಕಾರದ ಇದೇ ಸಮಸಂಖ್ಯೆಯ ಪತ್ರ ದಿನಾಂಕ 08.11.2017
3) ಸರ್ಕಾರದ ತಿದ್ದೋಲೆ ಸಂಖ್ಯೆ ಗ್ರಾಅಪ 103 ಗ್ರಾಪಂಸಿ 2016, ಬೆಂಗಳೂರು. ದಿನಾಂಕ: 20.11.2017.
4) ಸರ್ಕಾರದ ತಿದ್ದೋಲೆ ಸಂಖ್ಯೆ ಗ್ರಾಅಪ 103 ಗ್ರಾಪಂಸಿ 2016, ಬೆಂಗಳೂರು. ದಿನಾಂಕ:05.12.2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸಲಾಗಿದೆ. ಅದರಂತೆ ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಗಾಗಿ ಅರ್ಜಿ ನಮೂನೆ ಮತ್ತು ವೇಳಾ ಪಟ್ಟಿ ಹಾಗೂ ಪತ್ರಿಕಾ ಪ್ರಕಟಣೆ ವಿವರವನ್ನು ಕಳುಹಿಸಿ ಸದರಿ ವೇಳಾ ಪಟ್ಟಿಯಂತೆ ಮತ್ತು ಉಲ್ಲೇಖ (1) ರ ಸರ್ಕಾರದ ಆದೇಶದಂತೆ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನಿಗದಿತ ಅವಧಿಯೊಳಗೆ ಆಯ್ಕೆ ಮಾಡಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ತಿಳಿಸಲಾಗಿದೆ.

ಉಲ್ಲೇಖ (3) ಮತ್ತು (4)ರ ತಿದ್ದೋಲೆಯಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸಿ ಹೊರಡಿಸಿರುವ ಉಲ್ಲೇಖ (1) ರ ಆದೇಶವನ್ನು ಭಾಗಶ: ಮಾರ್ಪಡಿಸಿ ತಿದ್ದೋಲೆ ಹೊರಡಿಸಲಾಗಿದೆ. ಈ ತಿದ್ದೋಲೆಯ ಅಂಶಗಳನ್ನು ಅಳವಡಿಸಿಕೊಂಡು ಆಯ್ಕೆ ಪ್ರಕ್ರಿಯೆ ನಡೆಸಲು ಈ ಮೂಲಕ ತಿಳಿಸಿದೆ. ಪ್ರಸ್ತುತ ತಿದ್ದೋಲೆಯಂತೆ ಆಯ್ಕೆ ಪ್ರಕ್ರಿಯೆ ನಡೆಸುವ ಸಲುವಾಗಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ದಿನಾಂಕವನ್ನು ಇನ್ನು 15 ದಿನಗಳವರೆಗೆ ವಿಸ್ತರಿಸಲು ಹಾಗೂ ಈ ಸಂಬಂಧ ಬದಲಾದ ವಿಧಾನ ಮತ್ತು ನಿಯಮಗಳನ್ನು ಪರಿಷ್ಕೃತ ಪತ್ರಿಕಾ ಪ್ರಕಟಣೆ ಮೂಲಕ ತಿಳಿಯಪಡಿಸಲು ತಿಳಿಸಿದೆ. ಉಳಿದಂತೆ ಉಲ್ಲೇಖ (1) ರಿಂದ (4) ರಂತೆ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್‌ಗಳ ಆಯ್ಕೆ ಪ್ರಕ್ರಿಯೆಯ ಪೂರ್ಣಗೊಳಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಕೋರಿದೆ.

ತಮ್ಮ ನಂಬುಗೆಯ,

5/12/17

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಹೊರಡಿಸಿದೆ** 12/12 **ದಿನಾಂಕ**
**ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ**

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

1) ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
3) ವಿಶೇಷ ಅಧಿಕಾರಿ, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.